**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**
**ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ ಕಟ್ಟಡ ಜಯಂತಿ ನಗರ ವೃತ್ತ ಹೊರಮಾವು/ಕಲ್ಕೆರೆ ಮುಖ್ಯರಸ್ತೆ,**
**ಹೊರಮಾವು ಗ್ರಾಮ, ಬೆಂಗಳೂರು- 560113**

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೊಉವಿ/ಪಿಆರ್/ /2022-23 ದಿನಾಂಕ: 04.06.2022

*ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂಖ್ಯೆ:ಬಿ12(5)ಪಿಆರ್/35/ 2020-21 ದಿನಾಂಕ:21/09/2020 ರ ಆದೇಶದಂತೆ ಹೊರಮಾವು ವಾರ್ಡ್ ಸಂಖ್ಯೆ-25 ರ ನೋಡಲ್ ಅಧಿಕಾರಿಯಾದ ಶ್ರೀಮತಿ.ಸರೋಜದೇವಿ ಉಪ ಆಯುಕ್ತರು (ಮಹದೇವಪುರ) ರವರ ಅಧ್ಯಕ್ಷತೆಯಲ್ಲಿ ದಿನಾಂಕ:-04.06.2022 ರಂದು ಪೂರ್ವಾಹ್ನ 11.30 ಗಂಟೆಗೆ ಹೊರಮಾವು ಉಪವಿಭಾಗದ ವಾರ್ಡ್-25 ರ ಕಛೇರಿಯಲ್ಲಿ ಸಭೆಯನ್ನು ಏರ್ಪಡಿಸಲಾಗಿದ್ದು, ಸಭೆಯ ನಡವಳಿಗಳು ಈ ಕೆಳಕಂಡಂತಿರುತ್ತದೆ.*

<u>ಉಪಸ್ಥಿತರು:</u>

| ಕ್ರಸಂ | ಹೆಸರು | ಹುದ್ದೆ |
|---|---|---|
| | ಅಧಿಕಾರಿಗಳು | |
| 1 | ಶ್ರೀಮತಿ.ಸರೋಜಾದೇವಿ | ನೋಡಲ್ ಅಧಿಕಾರಿ ವಾ.ನಂ.25 ಹಾಗೂ ಉಪ-ಆಯುಕ್ತರು (ಮಹದೇವಪುರ) |
| 2 | ಶ್ರೀ.ರಮೇಶ್ | ಕಿರಿಯ ಅಭಿಯಂತರರು |
| 3 | ಶ್ರೀ.ಚೈತ್ರ ವೆಂಕಟೇಶ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ |
| | ಸಾರ್ವಜನಿಕರು | |
| 5 | ಶ್ರೀಮತಿ.ಶಾಂತಿ ಡೇವಿಡ್, ಶ್ರೀ.ಶ್ರೀನಿವಾಸ | ಹೊಯ್ಸಳನಗರ ಎನ್‌ಕ್ಲೇವ್ ವೆಲ್‌ಫೇರ್ ಅಸೋಸಿಯೇಷನ್: |
| 6 | ಶ್ರೀ.ಸುಭಾಷಿಣಿ ಮೆನನ್ | ಫರ್ನ್ಸ್ ರಸಿಡೆನ್ಸಿ ವೆಲ್‌ಫೇರ್ ಅಸೋಸಿಯೇಷನ್ |
| 7 | ಶ್ರೀ.ದಾಮೋದರ್ ಆರ್ಮುಗಂ, | ಸರ್.ಎಂ.ವಿ.ನಗರ ಬಡಾವಣೆ |
| 8 | ಶ್ರೀ.ನರೇಶ್.ಪಿ | ದಾಸಪ್ಪ ಲೇಔಟ್ |
| 9 | ಶ್ರೀ.ಮುರಳಿ.ಕೆ | ಹಾರ್ಕ್ ಗ್ರೂಪ್, ಹೊರಮಾವು ಗ್ರಾಮ |
| 10 | ಶ್ರೀ.ಕಮಲೇಶ್ ಮಹೇಶ್ವರಿ | ಕೆ.ನಾರಾಯಣಪುರ ಮೈನ್ ರೋಡ್ |
| 11 | ಶ್ರೀ.ದಯಾನಂದ್ ಹಾಗೂ ಶ್ರೀಮತಿ.ರಾಜೇಶ್ವರಿ | ದಾಸಪ್ಪ ವೆಲ್‌ಫೇರ್ ಅಸೋಸಿಯೇಷನ್ |
| 12 | ಮಂಜುನಾಥ | ಕನಕಗಿರಿ |

ಮಾನ್ಯ ನೋಡಲ್ ಅಧಿಕಾರಿ/ಉಪ ಆಯುಕ್ತರು (ಮಹದೇವಪುರ) ರವರ ಸಮ್ಮುಖದಲ್ಲಿ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ/ಸಿಬ್ಬಂದಿ ಇತರೆ ಸಂಘ ಸಂಸ್ಥೆಗಳು ಸಾರ್ವಜನಿಕರಿಗೆ ಸುಸ್ವಾಗತ ಕೋರುತ್ತಾ, ಬಿಬಿಎಂಪಿ ವಾರ್ಡ್ ನಂ.25 ರ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯ, ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ, ಬೃಹತ್ ನೀರುಗಾಲುವೆಗಳ ನಿರ್ವಹಣೆ, ಬೀದಿ ದೀಪಗಳ ನಿರ್ವಹಣೆ, ಕಲ್ಯಾಣ ಕಾರ್ಯಕ್ರಮಗಳು, 110 ಹಳ್ಳಿಗಳ ವ್ಯಾಪ್ತಿಯಲ್ಲಿ ಬಿಡಬ್ಲ್ಯೂಎಸ್‌ಎಸ್‌ಬಿ ರವರು ಕೊಳವೆ ಸಾಲುಗಳ ಅಳವಡಿಸುತ್ತಿರುವ ಸಂಬಂಧ ಹಾಗೂ ಸಾರ್ವಜನಿಕರ ಸಮಸ್ಯೆ ಕುಂದುಕೊರತೆಗಳನ್ನು ಬಗೆಹರಿಸುವಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿ ಹಾಗೂ ಸಾರ್ವಜನಿಕರಿಗೆ ಸುಸ್ವಾಗತ ಕೋರಿ ಸಭೆಯನ್ನು ಆರಂಭಿಸಿದರು.

ಮು.ತಿ.ನೋ

**ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚೆ:-**

**ಶ್ರೀಮತಿ.ಶಾಂತಿ ಡೇವಿಡ್, ಹೊಯ್ಸಳನಗರ ಎನ್‌ಕ್ಲೇವ್ ವೆಲ್‌ಫೇರ್ ಅಸೋಸಿಯೇಷನ್:-** ರವರು ಮಾತನಾಡಿ 3ನೇ ಮುಖ್ಯರಸ್ತೆ ಮತ್ತು 8ನೇ ಕ್ರಾಸ್ ಆರ್.ಸಿ.ಸಿ ಚರಂಡಿ ಸಮತಟ್ಟನ್ನು ಸರಿಪಡಿಸಿಕೊಳ್ಳಲು ಹಾಗೂ ಇದೇ ರಸ್ತೆಯಲ್ಲಿ ಒಳಚರಂಡಿ ನೀರು ಉಕ್ಕಿ ಹರಿಯುತ್ತಿದ್ದು, ಇದನ್ನು ಸರಿಪಡಿಸಲು ಅಗತ್ಯ ಕ್ರಮ ವಹಿಸಲು ಸಭೆಯಲ್ಲಿ ಕೋರಿಕೊಂಡಿರುತ್ತಾರೆ.

**ಕ್ರಮ:-** ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು(ಬೆಸ್ಕಾಂ) ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

**ಶ್ರೀ.ಸುಭಾಷಿಣಿ ಮೆನನ್ ಫರ್ನ್ ರೆಸಿಡೆನ್ಸಿ ವೆಲ್‌ಫೇರ್ ಅಸೋಸಿಯೇಷನ್:-** ರವರು ಮಾತನಾಡುತ್ತಾ, ಗೆದ್ದಲಹಳ್ಳಿ ಕ್ರಿಸ್ಟ್ ಸೇರುವ ಬಳಿ ಹೆಣ್ಣೂರು ಮುಖ್ಯರಸ್ತೆಯಲ್ಲಿ ಪ್ರತಿ ವರ್ಷ ಮಳೆಗಾಲದಲ್ಲಿ ರಸ್ತೆಯ ಮೇಲೆ ಸುಮಾರು 3 ಅಡಿ ಎತ್ತರಕ್ಕೆ ನೀರು ನಿಲ್ಲುತ್ತಿದ್ದು, ಇದರಿಂದ ಸಾರ್ವಜನಿಕರ ಅನೇಕ ವಾಹನಗಳು ಹಾಳಾಗುವುದಲ್ಲದೇ ಅಪಘಾತಗಳು ಸಹ ಸಂಭವಿಸುತ್ತಿದ್ದು, ಮತ್ತು ನೀರು ನಿಂತ ಸಮಯದಲ್ಲಿ ಸುಮಾರು 2.00 ಕಿ.ಮೀ ಸಂಚಾರ ದಟ್ಟಣೆ ಉಂಟಾಗುತ್ತಿದ್ದು, ಇದಕ್ಕೆ ಯಾರು ಹೊಣೆ ತುರ್ತಾಗಿ ಕ್ರಮಕೈಗೊಳ್ಳಲು ಮತ್ತು ಕ್ರಮ ಕೈಗೊಳ್ಳುವ ಬಗ್ಗೆ ಮುಂದಿನ ಸಭೆಯಲ್ಲಿ ತಿಳಿಸಲು ಕೋರಿಕೊಂಡಿರುತ್ತಾರೆ.

**ಕ್ರಮ:-** ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ ವಿಭಾಗ, ಕೆ.ಆರ್.ಪುರ ವಿಭಾಗ ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

**ಶ್ರೀ.ದಾಮೋದರ್ ಆರ್ಮುಗಂ, ಸರ್.ಎಂ.ವಿ.ನಗರ ಬಡಾವಣೆ:-** ರವರು ಮಾತನಾಡುತ್ತಾ, ಸರ್.ಎಂ.ವಿ ನಗರದ ಬಡಾವಣೆಯ 16ನೇ ಅಡ್ಡರಸ್ತೆಯಿಂದ 20ನೇ ಅಡ್ಡರಸ್ತೆಯ ನಿವಾಸಿಗಳಿಗೆ ಕಾವೇರಿ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕೋರಿ ಸದರಿ ರಸ್ತೆಗಳಲ್ಲಿ ತ್ಯಾಜ್ಯವನ್ನು ಎಸೆಯುವ ಬೇರೆ ಬಡಾವಣೆ ಮೇಲೆ ವಿಚಾರಕರು ಗಮನ ಹರಿಸಲು ಹಾಗೂ ಸಿಸಿಟಿವಿ ಅಳವಡಿಸಲು ಕೋರಿರುತ್ತಾರೆ. ಮತ್ತು 16ನೇ ಅಡ್ಡರಸ್ತೆಯಲ್ಲಿ ಮಳೆನೀರು ಮನೆಗಳಿಗೆ ನುಗ್ಗುತ್ತಿದ್ದು, ಮತ್ತು ಇದನ್ನು ಸರಿಪಡಿಸಲು ಇತ್ತೀಚಿನ ಮಳೆಗಾಲದಲ್ಲಿ ಮಳೆನೀರು ಮನೆಯೊಳಗೆ ನುಗ್ಗಿರುವ ಬಗ್ಗೆ ಹಾಗೂ 4ನೇ ಮುಖ್ಯರಸ್ತೆ, 8ನೇ ಅಡ್ಡರಸ್ತೆ 1ನೇ ಹಂತ ಡಾಂಬರೀಕರಣ ಮಾಡಿಕೊಡಬೇಕೆಂದು ಕೋರಿ. ಮತ್ತು ಬಿಬಿಎಂಪಿ ವಾರ್ಡ್ ಸದಸ್ಯರ ಸ್ಥಾನದಲ್ಲಿರುವ ನೋಡಲ್ ಅಧಿಕಾರಿಗಳು ವಾರ್ಡ್ ಸಮಿತಿಯಲ್ಲಿ ಸಾಧ್ಯವಾಗದ ಸಮಸ್ಯೆಗಳ ಪಟ್ಟಿಗಳನ್ನು ಅಭಿವೃದ್ಧಿ ಯೋಜನೆಗಳ ಬಗ್ಗೆ ಇಲಾಖೆಯ ಕಾಮಗಾರಿ ಮತ್ತು ಇತರ ಯೋಜನೆಗಳನ್ನು ಚರ್ಚಿಸಿ ಆಯವ್ಯಯ ಪಟ್ಟಿಯಲ್ಲಿ ಪಟ್ಟಿಯಲ್ಲಿ ಸೇರಿಸಿ ಈಗ ಪ್ರತ್ಯೇಕವಾದ ವಲಯ ಆಯುಕ್ತರಿಗೆ ಸಲ್ಲಿಸಲು ಮೌಂಟ್ ಕಾರ್ಮೆಲ್ ಕಾಲೇಜಿನಲ್ಲಿ (28.05.2022) ನಡೆದ 198 ಸದಸ್ಯರ ಸಮಾವೇಶದಲ್ಲಿ ತಿಳಿಸಲಾಯಿತು. ಮತ್ತು ಮಳೆಗಾಲಕ್ಕೆ ಮುಂಚಿತವಾಗಿ ಈ ಬಡಾವಣೆಯ ರಸ್ತೆಗಳಲ್ಲಿನ ಗುಂಡಿಗಳನ್ನು ಭರ್ತಿ ಮಾಡುವುದು ಹಾಗೆಯೇ 4ನೇ ಮುಖ್ಯರಸ್ತೆ, 8ನೇ ಅಡ್ಡರಸ್ತೆ (1ನೇ ಹಂತ) ಡಾಂಬರೀಕರಣಕ್ಕೆ ಕ್ರಮ ಇದರ ಬಗ್ಗೆ ನ್ಯಾಯಾಲಯ ಬಿಬಿಎಂಪಿ ಮುಖ್ಯ ಆಯುಕ್ತರ ಆದೇಶವನ್ನು ಪಾಲಿಸಲು ಕೋರಿಕೆ.

**ಕ್ರಮ:-** ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೊರಮಾವು ಉಪ-ವಿಭಾಗ ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಮತ್ತು ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು ಹೊರಮಾವು ವಾರ್ಡ್ ಸಂಖ್ಯೆ-25 ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

**ಶ್ರೀ.ದಯಾನಂದ್ ಹಾಗೂ ಶ್ರೀಮತಿ.ರಾಜೇಶ್ವರಿ ದಾಸಪ್ಪ** ಬಡಾವಣೆ. **ವೆಲ್‌ಫೇರ್ ಅಸೋಸಿಯೇಷನ್:-** ದಾಸಪ್ಪ ಬಡಾವಣೆ 2ನೇ ಅಡ್ಡರಸ್ತೆಯಲ್ಲಿ ಮೋರಿ ಕೆಲಸ ಕಾರ್ಯಗಳು ಪೂರ್ಣಗೊಳಿಸಿರುವುದಕ್ಕೆ ಧನ್ಯವಾದಗಳನ್ನು ವ್ಯಕ್ತ ಪಡಿಸಿರುತ್ತಾರೆ. ಹಾಗೂ 2ನೇ ಅಡ್ಡರಸ್ತೆಯಲ್ಲಿ ಕಸ ವಿಲೇವಾರಿಯ ಬಗ್ಗೆ ಕ್ರಮ ಕೈಗೊಳ್ಳಲು ಹಾಗೂ ಕಾವೇರಿ ನೀರು ಸರಬರಾಜು ವ್ಯವಸ್ಥೆ ಕಲ್ಪಿಸಿಕೊಳ್ಳಲು ಕೋರಿರುತ್ತಾರೆ.

**ಕ್ರಮ:-** ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಮತ್ತು ಹಿರಿಯ/ಕಿರಿಯ ಆರೋಗ್ಯ ನಿರೀಕ್ಷಕರು ಹೊರಮಾವು ವಾರ್ಡ್ ಸಂಖ್ಯೆ-25 ರವರಿಗೆ ಅಗತ್ಯ ಕ್ರಮವಹಿಸಲು ಸಭೆಯು ಸೂಚಿಸಿತು.

ಸಭೆಯನ್ನು ಮುಕ್ತಾಯಗೊಳಿಸುವ ಸಲುವಾಗಿ ಕೊನೆಯದಾಗಿ ಸ.ಕಾ.ಅ ಹೊರಮಾವು ಉಪ-ವಿಭಾಗ ರವರು ಸಭೆಯಲ್ಲಿ ಸೂಕ್ತ ಸಲಹೆ ಸೂಚನೆಗಳನ್ನು ಚರ್ಚಿಸಿದ್ದಕ್ಕೆ ಧನ್ಯವಾದಗಳನ್ನು ತಿಳಿಸುತ್ತಾ, ವಾರ್ಡ್‌ನ್ನು ಸಮಗ್ರವಾಗಿ ಅಭಿವೃದ್ಧಿಪಡಿಸುವ ಬಗ್ಗೆ ವಾರ್ಡ್ ಮಟ್ಟದಲ್ಲಿ ಕಾರ್ಯಯೋಜನೆಯನ್ನು ರೂಪಿಸಿಕೊಂಡು ಕ್ರಮವಹಿಸುವುದಾಗಿ ತಿಳಿಸುತ್ತಾ, ವಂದನೆಗಳೊಂದಿಗೆ ನೋಡಲ್ ಅಧಿಕಾರಿಗಳ ಅಪ್ಪಣೆ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಿದರು.

M. [signature]
ನೋಡಲ್ ಅಧಿಕಾರಿ ವಾರ್ಡ್ ನಂ25
ಹಾಗೂ ಉಪ ಆಯುಕ್ತರು
(ಮಹದೇವಪುರ) ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

[signature]
ಕಿರಿಯ ಅಭಿಯಂತರರು
ಹೊರಮಾವು ವಾರ್ಡ್‌ಸಂಖ್ಯೆ-25
ಬಿ.ಬಿ.ಎಂ.ಪಿ.